AUGUST O1, 2025

AKASHAVANI - DHARWAD

PRADESH SAMACHARA (KANNADA) 12 PM

<><><>

ಆಕಾಶವಾಣಿ

ಪ್ರದೇಶ ಸಮಾಚಾರ

<><><>

2035 ರ ವೇಳೆಗೆ, ಕ್ವಾಂಟಮ್ ಕಂಪ್ಯೂಟಿಂಗ್ ಕ್ಷೇತ್ರದಲ್ಲಿ, ಕರ್ನಾಟಕವನ್ನು 20 ಶತಕೋಟಿ ಡಾಲರ್ ಕ್ವಾಂಟಮ್ ಆರ್ಥಿಕ ರಾಜ್ಯವಾಗಿ ಅಭಿವೃದ್ಧಿಪಡಿಸಲು, ರಾಜ್ಯ ಸರ್ಕಾರ ಯೋಜಿಸಿದೆ; ಕ್ವಾಂಟಮ್ ನಗರಿ ಕ್ಯೂ–ಸಿಟಿಯನ್ನು ಸ್ಥಾಪಿಸಲಾಗುವುದು ಎಂದು, ವಿಜ್ಞಾನ ಮತ್ತು ತಂತ್ರಜ್ಞಾನ ಖಾತೆ ಸಚಿವ ಎನ್.ಎಸ್. ಬೋಸರಾಜು ತಿಳಿಸಿದ್ದಾರೆ. ಕ್ವಾಂಟಮ್ ಇಂಡಿಯಾ ಬೆಂಗಳೂರು ಸಮಾವೇಶದಲ್ಲಿ ಪಾಲ್ಗೊಂಡು, ಅವರು ಮಾತನಾಡಿದರು. ಬೆಂಗಳೂರಿನ ಭಾರತೀಯ ವಿಜ್ಞಾನ ಸಂಸ್ಥೆಯಲ್ಲಿ, ಕ್ವಾಂಟಮ್ ಸಂಶೋಧನಾ ಉದ್ಯಾನವನವನ್ನು ಸ್ಥಾಪಿಸಿದೆ. ತನ್ಮೂಲಕ, 55ಕ್ಕೂ ಹೆಚ್ಚು ಸಂಶೋಧನೆ ಮತ್ತು ಅಭಿವೃದ್ಧಿ ಯೋಜನೆಗಳು ಹಾಗೂ 13 ಸ್ಟಾರ್ಟ್‌ಅಪ್‌ಗಳನ್ನು ಬೆಂಬಲಿಸಿದೆ ಎಂದರು.

<><><>

ಕೇಂದ್ರ ಸರ್ಕಾರದ ವಿಮಾ ಹಣಕಾಸು ಯೋಜನೆಗಳ, ಪರಿಪೂರ್ಣತಾ ಅಭಿಯಾನವು, ಚಿತ್ರದುರ್ಗ ಜಿಲ್ಲೆ, ಹಿರಿಯೂರು ತಾಲೂಕು, ಡಿ.ದುರ್ಗ ಗ್ರಾಮ ಪಂಚಾಯ್ತಿ ವ್ಯಾಪ್ತಿಯಲ್ಲಿ ಜರುಗಿತು. ಹಣಕಾಸು ಸೇರ್ಪಡೆ ಅಭಿಯಾನದಲ್ಲಿ ಪಾಲ್ಗೊಂಡ ಕರ್ನಾಟಕ ಬ್ಯಾಂಕ್ ರಾಮಜೋಗಿಹಳ್ಳಿ ಶಾಖೆಯ, ವ್ಯವಸ್ಥಾಪಕ ಸತ್ಯನಾರಾಯಣ ಅವರು, ಬಿಮಾ ಯೋಜನೆಗಳ ಕುರಿತು ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ.

<><><>

ಧ್ವನಿ: ಸತ್ಯನಾರಾಯಣ 37 ಸೆಕೆಂದುಗಳು

<><><>

ಬೆಳಗಾವಿ ಜಿಲ್ಲೆ, ಹಂದಿಗನೂರಿನಲ್ಲಿ ನಡೆದ, ಹಣಕಾಸು ಸೇರ್ಪಡೆ ಪರಿಪೂರ್ಣತೆ ಅಭಿಯಾನದಲ್ಲಿ, ಹಣ ಉಳಿತಾಯ, ಹಣ ವೃದ್ಧಿ, ಡಿಜಿಟಲ್ ಸಾಕ್ಷರತೆ, ಪ್ರಧಾನಮಂತ್ರಿ ಜೀವನ ಜ್ಯೋತಿ ವಿಮೆ, ಅಟಲ್ ಪಿಂಚಣಿ ಯೋಜನೆಗೆ, ಅರ್ಜಿಗಳನ್ನು ಸ್ವೀಕರಿಸಲಾಗಿದೆ.

<><><>

ರಾಜ್ಯದಲ್ಲಿ ಕಾಳಸಂತೆಕೋರರು, ರಸಗೊಬ್ಬರದ ಕೃತಕ ಅಭಾವ ಸೃಷ್ಟಿಸಿ, ರೈತರ ಸಂಕಷ್ಟವನ್ನು ಇನ್ನಷ್ಟು ಹೆಚ್ಚಿಸುವ ಸಾಧ್ಯತೆ ಅಲ್ಲಗಳೆಯಲಾಗದು; ರಸಗೊಬ್ಬರ ಕೊರತೆ ಕಂಡುಬಂದಲ್ಲಿ, ತೀವ್ರ ನಿಗಾ ವಹಿಸುವಂತೆ, ರಾಜ್ಯ ಪೊಲೀಸ್ ಮಹಾನಿರ್ದೇಶಕ ಎಂ.ಎ. ಸಲೀಂ ಅವರಿಗೆ ಸೂಚಿಸಿದ್ದಾಗಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಎಕ್ಸ್ ಮಾಧ್ಯಮದಲ್ಲಿ ತಿಳಿಸಿದ್ದಾರೆ.

ರಸಗೊಬ್ಬರಕ್ಕೆ ಕೃತಕ ಅಭಾವ ಸೃಷ್ಟಿಸುವವರ ಮೇಲೆ, ತೀವ್ರ ನಿಗಾ ವಹಿಸಿ, ಕಠಿಣ ಕಾನೂನು ಕ್ರಮ ಕೈಗೊಳ್ಳುವಂತೆ, ಮುಖ್ಯಮಂತ್ರಿಯವರು, ಪೊಲೀಸ್ ಇಲಾಖೆ ಮುಖ್ಯಸ್ಥರಿಗೆ ನಿರ್ದೇಶಿಸಿದ್ದಾರೆ.

<><><>

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಬೆಂಗಳೂರಿನ ವಿಧಾನಸೌಧದಲ್ಲಿ, ಗದಗ ಹಾಗೂ ವಿಜಯಪುರ ಜಿಲ್ಲೆಗಳ ಉಸ್ತುವಾರಿ ಸಚಿವರು, ಶಾಸಕರ ಜೊತೆ ಸುದೀರ್ಘ ಸಭೆ ನಡೆಸಿದರು. ಜಿಲ್ಲೆಗಳ ವ್ಯಾಪ್ತಿಯಲ್ಲಿ, ವಿವಿಧ ಇಲಾಖೆಗಳು ಕೈಗೊಂಡಿರುವ, ಅಭಿವೃದ್ಧಿ ಯೋಜನೆಗಳ ಪ್ರಗತಿ ಪರಿಶೀಲನೆ ನಡೆಸಿದರು. ರಸಗೊಬ್ಬರ ಕೊರತೆಯ ಬಗ್ಗೆ ಚರ್ಚಿಸಿ, ರೈತರಿಗೆ ತೊಂದರೆಯಾಗದಂತೆ, ಪರ್ಯಾಯ ಮಾರ್ಗ ಶೋಧಿಸುವಂತೆ, ಸೂಚಿಸಿದರು.

<><><>

ಬೆಂಗಳೂರು ಸ್ವಾತಂತ್ರ್ಯ ಉದ್ಯಾನವನದಲ್ಲಿ, 5 ನೇ ತಾರೀಖಿನಂದು ನಡೆಯಲಿರುವ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ನೇತೃತ್ವದ ಮತ ಗಳ್ಳತನ ವಿರೋಧಿ ಜನ ಸಮಾವೇಶದ ಸ್ಥಳವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪರಿಶೀಲಿಸಿದರು.

<><><>

ಕಲಬುರಗಿ ಜಿಲ್ಲಾ ಆಸ್ಪತ್ರೆಗೆ ಭೇಟಿ ನೀಡಿದ, ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮೀ, ಆರೋಗ್ಯಾಕಾಂಕ್ಷಿಗಳೊಂದಿಗೆ ಚರ್ಚಿಸಿದರು. ಜಿಮ್ಸ್ ನಿರ್ದೇಶಕ ಉಮೇಶ ರೆಡ್ಡಿ ಅವರೊಂದಿಗೆ, ಆಸ್ಪತ್ರೆಯ ಕುಂದು ಕೊರತೆ ಪರಿಶೀಲಿಸಿದ ಅವರು, ಸಾರ್ವಜನಿಕರ ಆರೋಗ್ಯ ಸಮಸ್ಯೆಗಳಿಗೆ, ವೈದ್ಯಾಧಿಕಾರಿಗಳು ಸಕಾಲಿವಾಗಿ ಸ್ಪಂದಿಸುವಂತೆ, ಸೂಚಸಿದರು. ಮಾತೃ ವಂದನಾ ಯೋಜನೆ ಅಡಿ ಅರ್ಜಿ ಸಲ್ಲಿಸಿರುವ, ತಾಯಂದಿರ ವಿವರ ಹಾಗೂ ಸ್ಥಿತಿಗತಿ ಕುರಿತು, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಕೂಡಲೇ ವಸ್ತುಸ್ಥಿತಿ ಮಾಹಿತಿ ನೀಡುವಂತೆ, ಆದೇಶಿಸಿದರು.

<><><>

ಮಂಡ್ಯ ತಾಲೂಕು, ದುದ್ದ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ, ಸಾರ್ವಜನಿಕರ ಸಮಸ್ಯೆ ಪರಿಹರಿಸಲು, ವಿಶೇಷ ಆ್ಯಪ್ ಅಭಿವೃದ್ಧಿ ಪಡಿಸಲಾಗಿದೆ ಎಂದು, ಮೇಲುಕೋಟೆ ಶಾಸಕ ದರ್ಶನ್ ಪುಟ್ಟಣ್ಣಯ್ಯ ತಿಳಿಸಿದ್ದಾರೆ. ದುದ್ದ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ, ಸಾವಿರದ 310ಕ್ಕೂ ಹೆಚ್ಚು ಮನೆಗಳಿವೆ. ಈಗಾಗಲೇ ಅಧಿಕಾರಿಗಳು, ಶೇಕಡ 90 ರ ಷ್ಟ ಮನೆಗಳಿಗೆ ತೆರಳಿ, ಸಮಸ್ಯೆಗಳ ಬಗ್ಗೆ ಮಾಹಿತಿ ಪಡೆದು, ಆ್ಯಪ್ ನಲ್ಲಿ ನಮೂದಿಸಿದ್ದಾರೆ ಎಂದರು.

<><><>

ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ, ಕಳೆದ ವ ರ್ಷ ಬಾಲ್ಯ ವಿವಾಹ, ಪೋಕ್ಸೊ ಸೇರಿದಂತೆ, ಮಾನವ ಕಳ್ಳ ಸಾಗಣೆ ಪ್ರಕರಣಗಳ ಸಂಖ್ಯೆಯಲ್ಲಿ, ಗಣನೀಯ ಏರಿಕೆ ಕಂಡು ಬಂದಿದ್ದು, ಪರಿಣಾಮಕಾರಿಯಾಗಿ ತಡೆಗಟ್ಟಲು, ಕಾವಲು ಸಮಿತಿಗಳನ್ನು ಬಲಪಡಿಸಲಾಗುವುದು ಎಂದು ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ತಿಳಿಸಿದ್ದಾರೆ. ಕನ್ನಡ ಭವನದಲ್ಲಿ ತರಬೇತಿ ಕಾರ್ಯಾಗಾರವನ್ನು ಉದ್ಘಾಟಿಸಿ, ಅವರು ಮಾತನಾಡಿದರು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ

<><><>